**All India Radio: Bangalore**
**National Bulletin In Kannada**
**03.03.2025  07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

- ಗುಜರಾತ್‌ನ ಗಿರ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ಇಂದು ರಾಷ್ಟ್ರೀಯ ವನ್ಯಜೀವಿ ಮಂಡಳಿ ಸಭೆ
- ಕರ್ನಾಟಕ ಸೇರಿದಂತೆ ಹಲವು ರಾಜ್ಯಗಳ ಬಜೆಟ್ ಅಧಿವೇಶನ ಇಂದಿನಿಂದ ಆರಂಭ
- ಡೈರಿ ವಲಯದಲ್ಲಿ ಸುಸ್ಥಿರತೆ ಕುರಿತ ಕಾರ್ಯಾಗಾರಕ್ಕೆ ಇಂದು ಕೇಂದ್ರ ಸಚಿವ ಅಮಿತ್ ಶಾ ಚಾಲನೆ
- ಐಸಿಸಿ ಚಾಂಪಿಯನ್ಸ್ ಟ್ರೋಫಿ : ನ್ಯೂಜಿಲೆಂಡ್ ವಿರುದ್ಧ ಭಾರತಕ್ಕೆ ೪೪ ರನ್‌ಗಳ ಭರ್ಜರಿ ಜಯ

<><><><>

ವಿಶ್ವ ವನ್ಯಜೀವಿ ದಿನದ ಅಂಗವಾಗಿ, ಗುಜರಾತ್‌ನ ಜುನಾಗಢ ಜಿಲ್ಲೆಯ ಸಸಾನ್ ಗೀರ್‌ನಲ್ಲಿ ಇಂದು ನಡೆಯಲಿರುವ ರಾಷ್ಟ್ರೀಯ ವನ್ಯಜೀವಿ ಮಂಡಳಿ ಸಭೆಯ ಅಧ್ಯಕ್ಷತೆಯನ್ನು ಪ್ರಧಾನಿ ನರೇಂದ್ರ ಮೋದಿ ವಹಿಸಲಿದ್ದಾರೆ. ಸೇನಾ ಸಿಬ್ಬಂದಿ ಮುಖ್ಯಸ್ಥರು, ವಿವಿಧ ರಾಜ್ಯಗಳ ಸದಸ್ಯರು, ಈ ಕ್ಷೇತ್ರದಲ್ಲಿ ಕೆಲಸ ಮಾಡುವ ಎನ್‌ಜಿಒಗಳ ಪ್ರತಿನಿಧಿಗಳು, ಮುಖ್ಯ ವನ್ಯಜೀವಿ ವಾರ್ಡನ್‌ಗಳು ಮತ್ತು ವಿವಿಧ ರಾಜ್ಯಗಳ ಕಾರ್ಯದರ್ಶಿಗಳು ಸೇರಿದಂತೆ ೪೭ ಸದಸ್ಯರನ್ನು ಎನ್.ಬಿ.ಡಬ್ಲ್ಯೂ.ಎಲ್ ಹೊಂದಿದೆ. ಈ ಮಂಡಳಿ, ವನ್ಯಜೀವಿಗಳು ಹಾಗೂ ಅರಣ್ಯಗಳ ಸಂರಕ್ಷಣೆ ಮತ್ತು ಅಭಿವೃದ್ಧಿಗಾಗಿ ಕಾರ್ಯನಿರ್ವಹಿಸುತ್ತದೆ. ಸಭೆಯ ಬಳಿಕ ಪ್ರಧಾನಿ, ಸಸಾನ್‌ನಲ್ಲಿ ಕೆಲವು ಮಹಿಳಾ ಅರಣ್ಯ ಸಿಬ್ಬಂದಿಯೊಂದಿಗೆ ಸಂವಾದ ನಡೆಸಲಿದ್ದಾರೆ. ಗುಜರಾತ್ ಗೆ ೩ ದಿನಗಳ ಪ್ರವಾಸ ಕೈಗೊಂಡಿರುವ ಪ್ರಧಾನಿ, ನಿನ್ನೆ ಜಾಮ್‌ನಗರದ, ವಂತಾರ ಪ್ರಾಣಿ ರಕ್ಷಣಾ ಕೇಂದ್ರಕ್ಕೆ ಭೇಟಿ ನೀಡಿದರು.

ಸೋಮನಾಥ ದೇವಾಲಯಕ್ಕೂ ಭೇಟಿ ನೀಡಿದ ಅವರು, ಸೋಮನಾಥ ಮಹಾದೇವನಿಗೆ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಸಂಜೆ ಸೋಮನಾಥ ಟ್ರಸ್ಟ್ ಸಭೆಯ ಅಧ್ಯಕ್ಷತೆಯನ್ನೂ ಪ್ರಧಾನಿ ವಹಿಸಿದ್ದರು.

<><><><>

ಕರ್ನಾಟಕ ಸೇರಿದಂತೆ ಹಲವು ರಾಜ್ಯಗಳ ಬಜೆಟ್ ಅಧಿವೇಶನಗಳು ಇಂದಿನಿಂದ ಆರಂಭಗೊಳ್ಳುತ್ತಿವೆ. ಕರ್ನಾಟಕದಲ್ಲಿ ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನು ಉದ್ದೇಶಿಸಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರ ಭಾಷಣದ ಮೂಲಕ ಬಜೆಟ್ ಅಧಿವೇಶನ ಆರಂಭಗೊಳ್ಳುತ್ತಿದೆ. ಜಮ್ಮು ಕಾಶ್ಮೀರದಲ್ಲಿ ಇಂದಿನಿಂದ ಕಳೆದ ವರ್ಷ ಅಕ್ಟೋಬರ್‌ನಲ್ಲಿ ಅಧಿಕಾರ ವಹಿಸಿಕೊಂಡ ಬಳಿಕ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ನೇತೃತ್ವದ ನ್ಯಾಷನಲ್ ಕಾನ್ಫರೆನ್ಸ್ ಸರ್ಕಾರದ ಮೊದಲ ಬಜೆಟ್ ಅಧಿವೇಶನ ನಡೆಯಲಿದ್ದರೆ, ಮಹಾರಾಷ್ಟ್ರ ಹಾಗೂ ನಾಗಾಲ್ಯಾಂಡ್ ವಿಧಾನಸಭೆಯ ಬಜೆಟ್ ಅಧಿವೇಶನವೂ ಇಂದು ಪ್ರಾರಂಭಗೊಳ್ಳಲಿದೆ. ಕರ್ನಾಟಕ ವಿಧಾನಮಂಡಲ ಬಜೆಟ್ ಅಧಿವೇಶನ ಕುರಿತು ಹೆಚ್ಚಿನ ಮಾಹಿತಿ:

**(ಅಭಯ್ ೩೩ ಸೆಕೆಂಡ್ಸ್)**

ಕರ್ನಾಟಕ ವಿಧಾನಮಂಡಲದ ಬಜೆಟ್ ಅಧಿವೇಶನ ಇಂದು ಆರಂಭವಾಗಲಿದೆ. ಇದು ಈ ವರ್ಷದ ಮೊದಲ ಅಧಿವೇಶನವಾಗಿರುವುದರಿಂದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು, ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನು ಉದ್ದೇಶಿಸಿ ಭಾಷಣ ಮಾಡುವ ಮೂಲಕ ಅಧಿವೇಶನ ಪ್ರಾರಂಭಗೊಳ್ಳಲಿದೆ. ಇಂದು ಬೆಳಿಗ್ಗೆ ೧೧ ಗಂಟೆಗೆ ಅಧಿವೇಶನ ನಿಗದಿಯಾಗಿದೆ. ಹಣಕಾಸು ಖಾತೆಯನ್ನೂ ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇದೇ ೭, ಶುಕ್ರವಾರದಂದು ಕರ್ನಾಟಕದ ಬಜೆಟ್ ಅನ್ನು ಮಂಡಿಸಲಿದ್ದಾರೆ. ಪ್ರತಿಪಕ್ಷಗಳು ಬೆಲೆ ಏರಿಕೆ ಸೇರಿದಂತೆ ವಿವಿಧ ವಿಷಯಗಳ ಕುರಿತು ಸರ್ಕಾರವನ್ನು ಪ್ರಶ್ನಿಸಲು ಸಿದ್ಧತೆ ನಡೆಸಿದ್ದರೆ, ತಕ್ಕ ಉತ್ತರ ನೀಡಲು ಆಡಳಿತಾರೂಢ ಕಾಂಗ್ರೆಸ್ ಸರ್ಕಾರ ಸಜ್ಜಾಗಿದೆ. ಈ ಬಾರಿಯ ಬಜೆಟ್ ಅಧಿವೇಶನ ಇದೇ ೨೧ ರವರೆಗೆ ನಡೆಯಲಿದೆ. ಜಮ್ಮು ಮತ್ತು ಕಾಶ್ಮೀರ ವಿಧಾನಸಭೆಯ ಒಂದು ತಿಂಗಳ ಅವಧಿಯ ಬಜೆಟ್ ಅಧಿವೇಶನ ಇಂದು ಜಮ್ಮುವಿನಲ್ಲಿ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಅವರ ಭಾಷಣದೊಂದಿಗೆ ಪ್ರಾರಂಭವಾಗಲಿದೆ.

೨೦೧೮ ರಲ್ಲಿ ಹಿಂದಿನ ಜಮ್ಮು ಮತ್ತು ಕಾಶ್ಮೀರ ರಾಜ್ಯದಲ್ಲಿ ಪಿಡಿಪಿ-ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೊನೆಯ ಬಜೆಟ್ ಅಧಿವೇಶನ ನಡೆದಿತ್ತು. ಹಣಕಾಸು ಖಾತೆಯನ್ನು ಹೊಂದಿರುವ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಇದೇ ೭ ರಂದು ಬಜೆಟ್ ಮಂಡಿಸಲಿದ್ದಾರೆ. ನಾಗಾಲ್ಯಾಂಡ್ ವಿಧಾನಸಭೆಯ ಬಜೆಟ್ ಅಧಿವೇಶನವೂ ಇಂದು ಪ್ರಾರಂಭವಾಗಲಿದೆ. ನಾಗಾಲ್ಯಾಂಡ್ ರಾಜ್ಯಪಾಲ ಲಾ ಗಣೇಶನ್ ಸದನವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ರಾಜ್ಯಪಾಲರ ಭಾಷಣದ ಕುರಿತು ಚರ್ಚೆ ನಾಳೆ ನಡೆಯಲಿದೆ, ಜೊತೆಗೆ ವಿವಿಧ ವಾರ್ಷಿಕ ಆಡಳಿತ ಮತ್ತು ವಿಧಾನಸಭೆ ಸಮಿತಿ ವರದಿಗಳ ಮಂಡನೆ ಮತ್ತು ಸರ್ಕಾರಿ ಮಸೂದೆಗಳ ಪರಿಚಯ ನಡೆಯಲಿದೆ. ವಿತ್ತ ಖಾತೆಯನ್ನು ಹೊಂದಿರುವ ಮುಖ್ಯಮಂತ್ರಿ ನೀಫಿಯು ರಿಯೊ ಇದೇ ೬ ರಂದು ರಾಜ್ಯ ಬಜೆಟ್ ಮಂಡಿಸಲಿದ್ದಾರೆ. ಬಜೆಟ್ ಕುರಿತು ಸಾಮಾನ್ಯ ಚರ್ಚೆ ಶುಕ್ರವಾರ ನಡೆಯಲಿದೆ. ಶನಿವಾರ ಅಧಿವೇಶನವನ್ನು ಅನಿರ್ದಿಷ್ಟಾವಧಿಗೆ ಮುಂದೂಡಲಾಗುವುದು.

<><><><>

ತೆಲಂಗಾಣದ ಹೈದರಾಬಾದ್‌ನಲ್ಲಿ ನಿನ್ನೆ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಭಾರತೀಯ ತಂತ್ರಜ್ಞಾನ ಸಂಸ್ಥೆ - ಐಐಟಿ ಹೈದರಾಬಾದ್‌ನ ವಿದ್ಯಾರ್ಥಿಗಳು ಹಾಗೂ ಬೋಧನಾ ಸಿಬ್ಬಂದಿಯೊಂದಿಗೆ ಸಂವಾದ ನಡೆಸಿದರು. ಈ ವೇಳೆ ಮಾತನಾಡಿದ ಅವರು, ಕೃತಕ ಬುದ್ಧಿಮತ್ತೆ - ಎಐ ಕ್ಷಣಕ್ಷಣಕ್ಕೂ ಬದಲಾವಣೆಗಳನ್ನು ತರುತ್ತಿದೆ. ಅದು ಒಂದು ನೂತನ ಯುಗದ ಆರಂಭಕ್ಕೆ ನಾಂದಿ ಹಾಡಿದೆ. ಇದರಿಂದಾಗಿ ಹೊಸ ರೀತಿಯ ಕೈಗಾರಿಕಾ ಕ್ರಾಂತಿಗೆ ದೇಶ ಸಜ್ಜಾಗಿದೆ ಎಂದು ಹೇಳಿದರು.

**ಧ್ವನಿ : ಜಗದೀಪ್ ಧನ್‌ಕರ್ (೧೭ ಸೆಕೆಂಡ್‌ಗಳು)**

<><><><>

ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ, ಡೈರಿ ವಲಯದಲ್ಲಿ ಸುಸ್ಥಿರತೆ ಕುರಿತ ಕಾರ್ಯಾಗಾರವನ್ನು ನವದೆಹಲಿಯಲ್ಲಿ ಇಂದು ಉದ್ಘಾಟಿಸಲಿದ್ದಾರೆ. ಪರಿಸರ ಕಾಳಜಿಯೊಂದಿಗೆ ಆರ್ಥಿಕ ಬೆಳವಣಿಗೆಯೊಂದಿಗೆ ಸುಸ್ಥಿರ ಡೈರಿ ಕೃಷಿಯನ್ನು ಉತ್ತೇಜಿಸುವ ಗುರಿ ಹೊಂದಿರುವ ಸಹಕಾರ ಸಚಿವಾಲಯ, ಮತ್ತು ಪಶುಸಂಗೋಪನೆ, ಹೈನುಗಾರಿಕೆ ಮತ್ತು ಮೀನುಗಾರಿಕೆ ಸಚಿವಾಲಯದ ನೀತಿಗಳು ಮತ್ತು ಉಪಕ್ರಮಗಳ ಕುರಿತು ಈ ಕಾರ್ಯಾಗಾರ ಜರುಗಲಿದೆ.

ಇದೇ ವೇಳೆ, ವಿವಿಧ ರಾಜ್ಯಗಳಲ್ಲಿ ಜೈವಿಕ ಅನಿಲ ಸ್ಥಾವರಗಳ ಸ್ಥಾಪನೆಗಾಗಿ ಹಲವು ಒಡಂಬಡಿಕೆಗಳಿಗೆ ಸಹಿ ಹಾಕಲಾಗುವುದು.

<><><>

ಗುಜರಾತ್‌ನ ಗಾಂಧಿನಗರದಲ್ಲಿ ಇಂದು ಕಲ್ಲಿದ್ದಲು ಸಚಿವಾಲಯ ವಾಣಿಜ್ಯ ಕಲ್ಲಿದ್ದಲು ಗಣಿ ಹರಾಜು ಮತ್ತು ಹೂಡಿಕೆ ಅವಕಾಶಗಳ ಕುರಿತು ರೋಡ್ ಶೋ ಅನ್ನು ಆಯೋಜಿಸಲಿದೆ. ವಾಣಿಜ್ಯ ಕಲ್ಲಿದ್ದಲು ಗಣಿಗಾರಿಕೆಯನ್ನು ಉತ್ತೇಜಿಸಲು ಮತ್ತು ಖಾಸಗಿ ಹೂಡಿಕೆಯನ್ನು ಆಕರ್ಷಿಸಲು ಸಚಿವಾಲಯದ ನಿರಂತರ ಪ್ರಯತ್ನಗಳ ಭಾಗವಾಗಿ ಈ ರೋಡ್ ಶೋ ಅನ್ನು ಆಯೋಜಿಸಲಾಗುತ್ತಿದೆ. ಭಾರತದ ಕಲ್ಲಿದ್ದಲು ವಲಯದಲ್ಲಿ ಖಾಸಗಿ ವಲಯದ ಭಾಗವಹಿಸುವಿಕೆಗೆ ಉತ್ತೇಜನ ನೀಡಲು ಉದ್ಯಮದ ಪಾಲುದಾರರು, ಸಂಭಾವ್ಯ ಹೂಡಿಕೆದಾರರು ಮತ್ತು ನೀತಿ ನಿರೂಪಕರನ್ನು ಒಟ್ಟುಗೂಡಿಸುವ ಗುರಿಯನ್ನು ಈ ಕಾರ್ಯಕ್ರಮ ಹೊಂದಿದೆ.

<><><>

ಭಾರತ-ಅಮೆರಿಕ ನಡುವಿನ ಪ್ರಸ್ತಾವಿತ ದ್ವಿಪಕ್ಷೀಯ ವ್ಯಾಪಾರ ಒಪ್ಪಂದಗಳ ಮಾತುಕತೆಗಳಿಗಾಗಿ ಇಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅಮೆರಿಕಗೆ ಭೇಟಿ ನೀಡಲಿದ್ದಾರೆ. ಈ ವೇಳೆ ಅವರು, ಅಮೆರಿಕ ವ್ಯಾಪಾರ ಪ್ರತಿನಿಧಿ ಯುಎಸ್‌ಟಿಆರ್ ಜೆಮಿಸನ್ ಗ್ರೀರ್ ಮತ್ತು ಅಮೆರಿಕ ವಾಣಿಜ್ಯ ಕಾರ್ಯದರ್ಶಿ ಹೊವಾರ್ಡ್ ಲುಟ್ನಿಕ್ ಅವರೊಂದಿಗೆ ಮಾತುಕತೆ ನಡೆಸುವ ನಿರೀಕ್ಷೆಯಿದೆ. ಇತ್ತೀಚೆಗೆ ಪ್ರಧಾನಿ ನರೇಂದ್ರ ಮೋದಿ ವಾಷಿಂಗ್‌ಟನ್‌ಗೆ ಭೇಟಿ ನೀಡಿದ್ದ ವೇಳೆ ಭಾರತ ಹಾಗೂ ಅಮೆರಿಕ ನಡುವಿನ ವಾಣಿಜ್ಯ ವ್ಯವಹಾರಗಳನ್ನು ೫೦೦ ಶತಕೋಟಿ ಡಾಲರ್‌ಗೆ ದ್ವಿಗುಣಗೊಳಿಸಲು ಉಭಯ ರಾಷ್ಟ್ರಗಳು ಒಮ್ಮತ ವ್ಯಕ್ತಪಡಿಸಿದ್ದವು. ಇದೇ ವೇಳೆ ಬಹುವಲಯ ದ್ವಿಪಕ್ಷೀಯ ವ್ಯಾಪಾರ ಒಪ್ಪಂದ ಬಿಟಿಎ ಕುರಿತ ಮೊದಲ ಹಂತದ ಮಾತುಕತೆ ನಡೆಸಲು ಸಹಮತ ಸೂಚಿಸಿದ್ದರು.

<><><>

ಭಾರತ ಹಾಗೂ ಬಾಂಗ್ಲಾದೇಶದ ನದಿ ತಜ್ಞರು ಇಂದು ಪಶ್ಚಿಮ ಬಂಗಾಳದ ಫರಕ್ಕಾಗೆ ಭೇಟಿ ನೀಡಲಿದ್ದು, ಈ ವೇಳೆ ೨೦೨೬ರ ಡಿಸೆಂಬರ್‌ನಲ್ಲಿ ಕೊನೆಗೊಳ್ಳಲಿರುವ ಗಂಗಾಜಲ ಒಪ್ಪಂದದ ನವೀಕರಣ ಕುರಿತ ಮಾತುಕತೆಗಳನ್ನು ಮುಂದುವರೆಸಲು ಫರಕ್ಕಾದಲ್ಲಿರುವ ನೀರಿನ ಮಟ್ಟವನ್ನು ಪರಿಶೀಲಿಸಲಿದ್ದಾರೆ.

ಜಂಟಿ ನದಿ ಆಯೋಗದ ಸದಸ್ಯರಾದ ಮೊಹಮ್ಮದ್ ಅಬುಲ್ ಹೊಸೇನ್ ನೇತೃತ್ವದ ೧೧ ಸದಸ್ಯರ ಬಾಂಗ್ಲಾದೇಶ ತಂಡ ಭಾರತೀಯ ನಿಯೋಗದೊಂದಿಗೆ ಫರಕ್ಕಾಗೆ ತೆರಳಲಿದೆ. ಬಾಂಗ್ಲಾದೇಶದ ತಜ್ಞರು ಇದೇ ೭ ರಂದು ರಾಜ್ಯ ನೀರಾವರಿ ಕಾರ್ಯದರ್ಶಿ ಮನೀಶ್ ಜೈನ್ ಅವರೊಂದಿಗೆ ಸಭೆ ನಡೆಸಲಿದ್ದಾರೆ. ಜಲಶಕ್ತಿ ಸಚಿವಾಲಯದ ಪ್ರಕಾರ ಭಾರತ ಹಾಗೂ ಬಾಂಗ್ಲಾದೇಶ ೫೪ ನದಿಗಳನ್ನು ಹಂಚಿಕೊಳ್ಳುತ್ತದೆ. ಗಂಗಾಜಲ ಒಪ್ಪಂದಕ್ಕೆ ೧೯೯೬ರ ಡಿಸೆಂಬರ್ ೧೨ರಂದು ಅಂದಿನ ಭಾರತದ ಪ್ರಧಾನಿ ಹೆಚ್.ಡಿ. ದೇವೇಗೌಡ ಹಾಗೂ ಅವರ ಬಾಂಗ್ಲಾದೇಶದ ಸಹವರ್ತಿ ಶೇಖ್ ಹಸೀನಾ ಅವರು ಸಹಿ ಹಾಕಿದ್ದರು.

<><><>

ಆಮ್ ಆದ್ಮಿ ಪಕ್ಷ ನೇತೃತ್ವದ ದೆಹಲಿ ಸರ್ಕಾರದ ಅವಧಿಗೆ ಸಂಬಂಧಿಸಿದ ಸಾರ್ವಜನಿಕ ಆರೋಗ್ಯ ಮೂಲಸೌಕರ್ಯ ಮತ್ತು ಆರೋಗ್ಯ ಸೇವೆಗಳ ನಿರ್ವಹಣೆಯ ಕಾರ್ಯಕ್ಷಮತೆಯ ಲೆಕ್ಕ ಪರಿಶೋಧನೆ ಕುರಿತ ಸಿಎಜಿ ವರದಿ ಕುರಿತು ದೆಹಲಿ ವಿಧಾನಸಭೆಯಲ್ಲಿಂದು ಚರ್ಚೆ ಪುನರಾರಂಭವಾಗಲಿದೆ. ಈ ವರದಿಯನ್ನು ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ, ಕಳೆದ ಫೆಬ್ರವರಿ ೨೮ ರಂದು ವಿಧಾನಸಭೆಯಲ್ಲಿ ಮಂಡಿಸಿದ್ದರು.

<><><>

ಶ್ರೀಶೈಲಂ ಎಡದಂಡೆ ಕಾಲುವೆ ಸುರಂಗದೊಳಗೆ ಸಿಲುಕಿರುವ ಎಂಟು ಮಂದಿಯ ಸುರಕ್ಷತೆಗಾಗಿ ಸರ್ಕಾರ ರಕ್ಷಣಾ ಕಾರ್ಯಾಚರಣೆಯನ್ನು ವೇಗಗೊಳಿಸಲು ಪ್ರಯತ್ನಿಸುತ್ತಿದೆ ಎಂದು ತೆಲಂಗಾಣ ಮುಖ್ಯಮಂತ್ರಿ ಎ. ರೇವಂತ್ ರೆಡ್ಡಿ ಹೇಳಿದ್ದಾರೆ. ಅಗತ್ಯವಿದ್ದರೆ, ಸುರಂಗದೊಳಗೆ ರೋಬೋಟ್‌ಗಳನ್ನು ಬಳಸುವಂತೆ ರಕ್ಷಣಾ ಕಾರ್ಯಾಚರಣೆ ಕೈಗೊಂಡಿರುವ ಅಧಿಕಾರಿಗಳಿಗೆ ಸರ್ಕಾರ ಸೂಚಿಸಿದೆ ಎಂದು ಅವರು ತಿಳಿಸಿದ್ದಾರೆ. ನಾಗರ್ಕರ್ನೂಲ್ ಜಿಲ್ಲೆಯ ಅಪಘಾತದ ಸ್ಥಳಕ್ಕೆ ನಿನ್ನೆ ಸಂಜೆ ಭೇಟಿ ನೀಡಿ, ನಂತರ ಮಾತನಾಡಿದ ಮುಖ್ಯಮಂತ್ರಿ, ಹಾನಿಗೊಳಗಾದ ಕನ್ವೇಯರ್ ಬೆಲ್ಟ್ ದುರಸ್ತಿ ಮಾಡಿದ ನಂತರ, ರಕ್ಷಣಾ ಕಾರ್ಯಾಚರಣೆ ವೇಗ ಪಡೆಯುತ್ತದೆ ಎಂದು ಹೇಳಿದರು. ಕಳೆದ ತಿಂಗಳು ೨೨ ರಿಂದ ಎಸ್‌ಎಲ್‌ಬಿಸಿ ಸುರಂಗದಡಿ, ಇಬ್ಬರು ಎಂಜಿನಿಯರ್‌ಗಳು ಸೇರಿದಂತೆ ಎಂಟು ಜನರು ಸಿಲುಕಿಕೊಂಡಿದ್ದು, ಅವರನ್ನು ಸುರಕ್ಷಿತವಾಗಿ ತರಲು ರಕ್ಷಣಾ ಕಾರ್ಯಾಚರಣೆ ಭರದಿಂದ ಸಾಗುತ್ತಿದೆ.

<><><>

ದುಬೈನ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಸಿಸಿ ಚಾಂಪಿಯನ್ಸ್ ಕ್ರಿಕೆಟ್ ಟ್ರೋಫಿ ಪಂದ್ಯದಲ್ಲಿ ಭಾರತ, ನ್ಯೂಜಿಲೆಂಡ್ ವಿರುದ್ಧ ೪೪ ರನ್ ಗಳ ಭರ್ಜರಿ ಜಯ ಗಳಿಸಿದೆ. ಇದರೊಂದಿಗೆ 'ಎ' ಗುಂಪಿನಲ್ಲಿ ಅಗ್ರ ತಂಡವಾಗಿ ಹೊರಹೊಮ್ಮಿದೆ. ೨೫೦ ರನ್‌ಗಳ ಗೆಲುವಿನ ಗುರಿ ಬೆನ್ನಟ್ಟಿದ ಕಿವೀಸ್ ತಂಡ, ಭಾರತದ ಮಾರಕ ಸ್ಪಿನ್ ದಾಳಿಗೆ ತತ್ತರಿಸಿ, ೪೫.೩ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು, ೨೦೫ ರನ್‌ಗಳಿಸಲಷ್ಟೇ ಶಕ್ತವಾಗಿ ಸೋಲೊಪ್ಪಿತು. ನ್ಯೂಜಿಲೆಂಡ್ ಪರ, ಕೇನ್ ವಿಲಿಯಮ್ಸನ್ ಅತ್ಯಧಿಕ ೮೧ ರನ್ ಗಳಿಸಿದರು. ಭಾರತದ ಪರ, ವರುಣ್ ಚಕ್ರವರ್ತಿ ಏಕದಿನ ಪಂದ್ಯದಲ್ಲಿ ಚೊಚ್ಚಲ ಐದು ವಿಕೆಟ್ ಪಡೆದು, ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಕುಲದೀಪ್ ಯಾದವ್ ಎರಡು, ಹಾರ್ದಿಕ್ ಪಾಂಡ್ಯ, ಅಕ್ಷರ್ ಪಟೇಲ್ ಮತ್ತು ರವೀಂದ್ರ ಜಡೇಜಾ ತಲಾ ಒಂದು ವಿಕೆಟ್ ಪಡೆದರು. ಟಾಸ್ ಗೆದ್ದ ನ್ಯೂಜಿಲೆಂಡ್ ಫೀಲ್ಡಿಂಗ್ ಆಯ್ದುಕೊಂಡಿತು. ಮೊದಲು ಬ್ಯಾಟ್ ಮಾಡಿದ ಭಾರತ, ಆರಂಭಿಕ ಆಘಾತ ಎದುರಿಸಿದರೂ, ನಿಗದಿತ ಓವರ್ ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೨೪೯ ರನ್ ಗಳಿಸಿತು. ಶ್ರೇಯಸ್ ಐಯ್ಯರ್ ೭೯ ರನ್‌ಗಳೊಂದಿಗೆ, ತಂಡ ಸವಾಲಿನ ಮೊತ್ತ ಗಳಿಸಲು ನೆರವಾದರು. ಹಾರ್ದಿಕ್ ಪಾಂಡ್ಯ ೪೫ ರನ್ ಗಳಿಸಿದರು. ನ್ಯೂಜಿಲೆಂಡ್ ಪರ, ಮ್ಯಾಟ್ ಹೆನ್ರಿ ಐದು ವಿಕೆಟ್ ಪಡೆದು, ಯಶಸ್ವಿ ಬೌಲರ್ ಎನಿಸಿದರು. ಎರಡೂ ತಂಡಗಳು ಈಗಾಗಲೇ ಗ್ರೂಪ್ ಎ ನಿಂದ ಸೆಮಿಫೈನಲ್‌ನಲ್ಲಿ ಸ್ಥಾನ ಪಡೆದಿವೆ. ನಾಳೆ ನಡೆಯಲಿರುವ ಮೊದಲ ಸೆಮಿಫೈನಲ್‌ನಲ್ಲಿ ಭಾರತ, ಆಸ್ಟ್ರೇಲಿಯಾವನ್ನು ಎದುರಿಸಲಿದೆ, ಇದೇ ೫ ರಂದು ನ್ಯೂಜಿಲೆಂಡ್, ದಕ್ಷಿಣ ಆಫ್ರಿಕಾ ವಿರುದ್ಧ ಸೆಣಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>